ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ಇಂಡಿ.
ಇವರ ನ್ಯಾಯಾಲಯದಲ್ಲಿ.

ಸಿ.ಸಿ.ನಂ. : 302/2019
ಪ್ರಾಸಾ : 1
ಚಾ.ಸಾ.: 2

ಸಾಕ್ಷಿದಾರರ ಹೆಸರು : ಶರಣಪ್ಪ ತಂ.ಹಣಮಂತ ಅವಟಿ

ವಯಸ್ಸು : 80 ವರ್ಷ

ಉದ್ಯೋಗ : ಮನೆಗೆಲಸ

ವಾಸ ಸ್ಥಳ : ಇಂಚಗೇರಿ

(ಈ ದಿವಸ ದಿನಾಂಕ 26-08-2021 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ:**

1) ಈ ಕೇಸಿನ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಜರುಗಿಸಿಲ್ಲ ಹಾಗೂ ಯಾವುದೇ ವಸ್ತು ಜಪ್ತುಪಡಿಸಿಕೊಂಡಿರುವುದಿಲ್ಲ. ಈಗ್ಗೆ ಎರಡು ವರ್ಷಗಳ ಹಿಂದೆ ನಮ್ಮ ಊರಿಗೆ ಪೋಲೀಸರು ಬಂದಿದ್ದಾಗ ಒಂದು ದಾಖಲೆಗೆ ಸಹಿ ಪಡೆದಿದ್ದಾರೆ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪಂಚನಾಮೆಯನ್ನು ನಿ.ಪಿ.1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು. ನಿ.ಪಿ.1 ರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು).

**ಪಾಟೀ ಸವಾಲು ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ:**

2) ದಿನಾಂಕ 29-3-2018 ರಂದು ಆರೋಪಿತರು ಮತ್ತು ಫಿರ್ಯಾದುದಾರರು ಜಗಳವಾಡಿದ ವಿಷಯವಾಗಿ ಸಾವಳಸಂಗ ಮತ್ತು ಹೊರ್ತಿ ಕಡೆಗೆ ಹೋಗುವ ಡಾಂಬರ ರಸ್ತೆಯಲ್ಲಿ ಇಂಚಗೇರಿ ಗ್ರಾಮದ ಬಸ್ ನಿಲ್ದಾಣದ ಹತ್ತಿರ ನಿ.ಪಿ.1 ರಂತೆ ಪೋಲೀಸರು ನನ್ನ ಹಾಗೂ ಚಾ.ಸಾ.3 ರವರ ಸಮಕ್ಷಮ ಪಂಚನಾಮೆ ಜರುಗಿಸಿ, ಸ್ಥಳದಿಂದ ಒಂದು ಕಲ್ಲನ್ನು ಜಪ್ತುಪಡಿಸಿಕೊಂಡು ನಿ.ಪಿ.1 ನ್ನು ಓದಿ ಹೇಳಿ ಅದಕ್ಕೆ ನಮ್ಮ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ.

3) ನಿ.ಪಿ.1 ರಂತೆ ಪಂಚನಾಮೆಯಲ್ಲಿ ಭಾಗವಹಿಸಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಶ್ರೀ ವಿ.ಎಸ್.ಸಿ., ಆರೋಪಿ ಪರ ವಕೀಲರಿಂದ:</u>**

4) ಪಾಟಿ ಸವಾಲು ಇರುವುದಿಲ್ಲವೆಂದು ನುಡಿದಿದ್ದಾರೆ.

**ಮರು ವಿಚಾರಣೆ : ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು
ವ ಜೆ.ಎಂ.ಎಫ್.ಸಿ., ಇಂಡಿ.